ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ: 17ನೇ ಜುಲೈ, 2019

ಬೆಳಗಾವಿ ಜಿಲ್ಲೆಯಲ್ಲಿ ಸರ್ವೇಯ ರ್ಗಳ ಅಭಾವದಿಂದ ಕೆಲಸ-ಕಾರ್ಯಗಳ ವಿಳಂಬವಾಗುತ್ತಿರುವ ಬಗ್ಗೆ

ಶ್ರೀಕವಟಗಿಮಠಮಹಾಂತೇಶಮಲ್ಲಿಕಾರ್ಜುನ(ಸ್ಥಳೀಯಸಂಸ್ಥೆಗಳಕ್ಷೇತ್ರ):-

220 (177) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿ ಜಿಲ್ಲೆಯನ್ನು ಪೋಡಿ ಮುಕ್ತವೆಂದು ಘೋಷಿಸುವುದು ಹಾಗೂ ಸರ್ವೇಯರ್ಗಳ ಅಭಾವದಿಂದ ಕೆಲಸ-ಕಾರ್ಯಗಳು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೆಳಗಾವಿ ಜಿಲ್ಲೆಯಲ್ಲಿ ಯಾವ ಯಾವ ವಿಧಾನಸಭಾ ಕ್ಷೇತ್ರಗಳಲ್ಲಿ ಯಾವ ಯಾವ ಗ್ರಾಮಗಳನ್ನು ಪೋಡಿ ಮುಕ್ತ ಗ್ರಾಮಗಳನ್ನಾಗಿ ಆಯ್ಕೆ ಮಾಡಲಾಗಿದೆ; (ವಿವರ ನೀಡುವುದು)

(ಇ) ಬೆಳಗಾವಿ ಜಿಲ್ಲೆಯಲ್ಲಿ ಮಂಜೂರಾಗಿರುವ ಸರ್ಕಾರಿ ಸರ್ವೇಯರು -ಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳು ಎಷ್ಟು; ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು; (ತಾಲ್ಲೂಕುವಾರು ವಿವರ ನೀಡುವುದು)

(ಈ) ಜಿಲ್ಲೆಯಲ್ಲಿಯ ಸರ್ವೇಯರ್ಗಳು ರೈತರಿಗೆ ಭೂಮಿ ಪೋಡಿ ಮಾಡಿಸಿಕೊಳ್ಳುತ್ತಿರುವ ಜಮೀನುದಾರರಿಗೂ ಅನಾವಶ್ಯಕವಾಗಿ ತೊಂದರೆ ನೀಡುತ್ತಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು;

(ಉ) ಇಂತಹ ಅಧಿಕಾರಿಗಳ ಸರ್ವೇಯರುಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ? (ಸಂಪೂರ್ಣ ವಿವರ ನೀಡುವುದು)